ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

76(602) ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸರ್ಕಾರಿ ಸ್ವಾಮ್ಯದಲ್ಲಿರುವ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು;

(ಆ) ಈ ವಿಶ್ವವಿದ್ಯಾಲಯಗಳಲ್ಲಿ ಎಷ್ಟು ಜನ ಉಪಕುಲಪತಿಗಳು ಖಾಯಂ ಆಗಿ ಸೇವೆ ಸಲ್ಲಿಸುತ್ತಿದ್ದಾರೆ; ಹಾಗೂ ಹಂಗಾಮಿಯಾಗಿ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪೂರ್ಣ ಪ್ರಮಾಣದ ಉಪ ಕುಲಪತಿಗಳ ನೇಮಕಾತಿಯ ಅನುಪಸ್ಥಿತಿಯಲ್ಲಿ ವಿಶ್ವವಿದ್ಯಾಲಯದ ಆಡಳಿತ ಮಟ್ಟವು ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಕಾರ್ಯನಿರ್ವಹಿಸುತ್ತಿರುವ ಉಪ ಕು¯ಪತಿಗಳ ಸೇವಾವಧಿ ಮುಗಿಯುತ್ತಿರುವುದರಿಂದ ಹೊಸ ಉಪಕುಲಪತಿಗಳ ನೇಮಕಕ್ಕಾಗಿ ಅವಶ್ಯವಿದ್ದಲ್ಲಿ ನಿಯಮಗಳಿಗೆ ತಿದ್ದುಪಡಿ ತಂದು ವಿಶ್ವವಿದ್ಯಾಲಯದ ಆಡಳಿತ ಸುಧಾರಣೆಗೆ ಕ್ರಮ ಕೈಗೊಳ್ಳಲಾಗುವುದೇ ?